## 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಾಮರಾಜನಗರ, ಪೀಠಾಸೀನ ಕೊಳ್ಳೇಗಾಲ

**SPL.C 5080/2025**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ಸುಪ್ರಿತ್.ಎ.ಎಸ್ | **ಪ್ರಮಾಣ ವಚನ ಭೋಧಿಸಿದ ದಿನಾಂಕ** |
| **ತಂದೆ ಹೆಸರು** | : | ಅಶೋಕ ಕುಮಾರ್ | 29.04.2026 |
| **ವಯಸ್ಸು** | : | 31 ವರ್ಷ | |
| **ವೃತ್ತಿ** | : | ಪಿ.ಎಸ್.ಐ, ಕೊಳ್ಳೇಗಾಲ ಗ್ರಾಮಾಂತರ ಪೊ.ಠಾಣೆ | **ಫ್ರಾ.ಸಾಃ** 17 |
| **ವಾಸ ಸ್ಥಳ** | : | ಕೊಳ್ಳೇಗಾಲ | **ಚಾ.ಸಾಃ** 48 |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

**ನಾನು ದಿಃ 12.08.2024 ರಿಂದ ಪಿ.ಎಸ್.ಐ ಆಗಿ ಕೊಳ್ಳೇಗಾಲ ಗ್ರಾಮಾಂತರ ಪೊ.ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.**

ದಿಃ 16.12.2024 ರಂದು ಬೆಳಿಗ್ಗೆ 9.30 ರ ಸಮಯದಲ್ಲಿ ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರ ಠಾಣೆಗೆ ಹಾಜರಾಗಿ ನೀಡಿದ ಲಿಖಿತ ಪಿರ್ಯಾದಿಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 247/2024 ರಲ್ಲಿ ಪ್ರಕರಣವನ್ನು ನೊಂದಾಯಿಸಿರುತ್ತೇನೆ. ಪಿರ್ಯಾದಿಯನ್ನು ನಿಪಿ 1 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿಪಿ 1(ಸಿ) ಎಂದು ಗುರುತಿಸಲಾಯಿತು. ಪ್ರ.ವರದಿಯನ್ನು ನಿಪಿ 41 ಎಂದು, ಸಾಕ್ಷಿ ಸಹಿಯನ್ನು ನಿಪಿ 41(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ 49 ರವರ ಆದೇಶದಂತೆ ಪಂಚರಾದ ಚಾಸಾ 20 ರಿಂದ 22 ರವರ ಸಮಕ್ಷಮ ಮದ್ಯಾಹ್ನ 1.30 ರಿಂದ 3.30

ರವರೆಗೆ ಚಾ.ನಗರ ಜಿಲ್ಲಾ ಆಸ್ಪತ್ರೆಯಲ್ಲಿ ಮೃತ ಪವಿತ್ರಾಳ ಶವ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಶವ ಪಂಚನಾಮೆಯನ್ನು ನಿಪಿ 42 ಎಂದು ಸಾಕ್ಷಿ ಸಹಿಯನ್ನು ನಿಪಿ 42(ಎ) ಎಂದು ಗುರುತಿಸಲಾಯಿತು. ಭಾವಚಿತ್ರಗಳನ್ನು ನಿಪಿ 2 ರಿಂದ 5 ಎಂದು ಈಗಾಗಲೇ ಗುರುತಿಸಲಾಗಿದೆ. ಅದೇ ದಿನ ಮೃತಳ ಶವವನ್ನು ವೈದ್ಯಕೀಯ ಪರೀಕ್ಷೆಗೆಂದು ಮನವಿ ಮಾಡಿರುತ್ತೇನೆ. ಮೃತಳ ಶವವನ್ನು ವಾರಸ್ಸುದಾರರಿಗೆ ನೀಡಿದ ಬಗ್ಗೆ ಚಾಸಾ 43 ರವರಿಂದ ಸ್ವೀಕೃತಿಯನ್ನು ಪಡೆದಿರುತ್ತೇನೆ. ಅದೇ ದಿನ ವಿದ್ಯುತ್ ಪರಿವೀಕ್ಷಕರಿಗೆ ಸ್ಥಳ ಪರಿಶೀಲನಾ ವರದಿ ನೀಡಲು ಮನವಿ ಸಲ್ಲಿಸಿರುತ್ತೇನೆ.

ದಿಃ 17.12.2024 ರಂದು ಬೆಳಗ್ಗೆ 7.00-9.00 ಗಂಟೆ ಸಮಯದಲ್ಲಿ ಪಂಚರಾದ ಚಾಸಾ 7 ಮತ್ತು 14 ರವರ ಸಮಕ್ಷಮ ಚಾಸಾ 2 ರವರು ಕೃತ್ಯ ನಡೆದ ಸ್ಥಳವನ್ನು ತೋರಿಸಿದ್ದು, ನಾನು ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಪಂಚನಾಮೆಯ ಸಮಯದಲ್ಲಿ ಸುಮಾರು 300 ಅಡಿ ಉದ್ದದ ತಂತಿಯನ್ನು ಮತ್ತು 92 ಕಾಡು ಮರದ ತುಂಡುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಪಂಚನಾಮೆಯನ್ನು ನಿಪಿ 06 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿಪಿ 06(ಡಿ) ಎಂದು ಗುರುತಿಸಲಾಯಿತು. ತಂತಿ ಮತ್ತು ಮರದ ತುಂಡುಗಳನ್ನು ಈಗಾಗಲೇ ಮು.ಮಾ 1 ಮತ್ತು 2 ಎಂದು ಗುರುತಿಸಲಾಗಿದೆ. ಮಹಜರ್ ಸಮಯದಲ್ಲಿ ತೆಗೆದ ಭಾವಚಿತ್ರಗಳನ್ನು ಸಾಕ್ಷಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ನಿಪಿ 7 ರಿಂದ 16 ಎಂದು ಗುರುತಿಸಲಾಗಿದೆ. ಮುಂದಿನ ತನಿಖೆಯನ್ನು ಚಾಸಾ 49 ರವರು ವಹಿಸಿಕೊಂಡಿರುತ್ತಾರೆ. ಶವ ಪಂಚನಾಮೆಯ ಸಮಯದಲ್ಲಿ ಭಾವಚಿತ್ರವನ್ನು ತೆಗೆದ ಬಮತ್ತು ಚಿತ್ರಿಕರಣ ಮಾಡಿದ ಸಂಬಂಧ ಚಾಸಾ 44 ರವರಿಂದ ಭಾರತೀಂಯ ಸಾಕ್ಷಿ ಅಧಿನಿಯಮ ಕಲಂ 63(4)(ಸಿ) ರಂತೆ ದೃಢಿಕರಣವನ್ನು ಪಡೆದಿರುತ್ತೇನೆ. ದೃಢಿಕರಣವನ್ನು ನಿಪಿ 39 ಮತ್ತು 40 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿಪಿ 39(ಬಿ) ಮತ್ತು 40(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ- ಶ್ರೀ ಎಂ.ಎಂ ವಕೀಲರಿಂದ**

ಚಾಸಾ 1 ರವರು ಸುಳ್ಳು ದೂರನ್ನು ನೀಡಿದ್ದಾರೆ ನಾನು ಸುಳ್ಳು ಮೊಕದ್ದಮೆ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಶವ ಪಂಚನಾಮೆಯ ಸಮಯದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಮಾಡಿಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಮೃತಳ ಶವ ಪಂಚನಾಮೆಯನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ 32 ರವರಿಗೆ ಸ್ಥಳ ಪರಿಶೀಲನೆ ಮಾಡಿ ವರದಿ ನೀಡುವಂತೆ ಯಾವುದೇ ಮನವಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನನಗೆ ಚಾಸಾ 2 ರವರು ಯಾವುದೇ ಸ್ಥಳ ತೋರಿಸಿಲ್ಲ, ನಾನು ನಿಪಿ 6 ರಂತೆ ಸ್ಥಳ ಪಂಚನಾಮೆಯನ್ನು ಬರೆದಿಲ್ಲ, ಮು.ಮಾ 1 ಮತ್ತು 2 ಅನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ 49 ರವರು ಮೌಖಿಕ ಆದೇಶ ಮಾಡಿರುತ್ತಾರೆ. ಚಾಸಾ 44 ರವರಿಂದ ಸುಳ್ಳು ದೃಢಿಕರಣವನ್ನು ಪಡೆದಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ, ಪೀಠಾಸೀನ ಕೊಳ್ಳೇಗಾಲ